## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2241
ಸದಸ್ಯರ ಹೆಸರು : ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್)
ಉತ್ತರಿಸುವ ಸಚಿವರು : ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು
ಉತ್ತರಿಸುವ ದಿನಾಂಕ : 26.03.2021

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಚಾಮರಾಜನಗರವು ಅಭಿವೃದ್ಧಿ ಹೊಂದುತ್ತಿರುವ ಜಿಲ್ಲಾ ಕೇಂದ್ರವಾಗಿದ್ದು, ಕರ್ನಾಟಕ ಹಾಗೂ ತಮಿಳುನಾಡು ಸಾರಿಗೆ ಸಂಸ್ಥೆಗಳ ಹೆಚ್ಚಿನ ಬಸ್ ಸಂಚಾರ ಇರುವುದರಿಂದ, ಮುಂದಿನ ಬೆಳವಣಿಗೆಯನ್ನು ದೃಷ್ಟಿಯಲ್ಲಿಟ್ಟುಕೊಂಡು, ಒಂದು ಹೈಟೆಕ್ ಬಸ್ ನಿಲ್ದಾಣ ಸ್ಥಾಪಿಸುವ ವಿಷಯ ಸರ್ಕಾರದ ಪರಿಶೀಲನೆಯಲ್ಲಿದೆಯೇ; ಈ ಬಗ್ಗೆ ಸರ್ಕಾರ ಗಮನಹರಿಸುವುದೇ; | ಚಾಮರಾಜನಗರದಲ್ಲಿ ಹೈಟೆಕ್ ಬಸ್ ನಿಲ್ದಾಣ ಸ್ಥಾಪಿಸುವ ವಿಷಯವು ಪರಿಶೀಲನೆಯಲ್ಲಿದ್ದು, ಈ ಬಗ್ಗೆ ಗಮನಹರಿಸಲಾಗುವುದು. |
| ಆ) | ಹಾಲಿ ಇರತಕ್ಕ ಬಸ್ ನಿಲ್ದಾಣ ಬಹಳ ಕಿರಿದಾಗಿದ್ದು, ಸಂತೇಮರಹಳ್ಳಿ ರಸ್ತೆಯಲ್ಲಿರುವ ರೇಷ್ಮೆ ಇಲಾಖೆಯ ಕಟ್ಟಡ ಮತ್ತು ಜಾಗವನ್ನು ವಶಕ್ಕೆ ತೆಗೆದುಕೊಂಡು ಈ ಸ್ಥಳದಲ್ಲಿ ಒಂದು ಹೈಟೆಕ್ ಬಸ್ ನಿರ್ಮಾಣ ಸ್ಥಾಪಿಸಲು ಕ್ರಮ ವಹಿಸಲಾಗುವುದೇ? | ಚಾಮರಾಜನಗರ ಪಟ್ಟಣದ ಸಂತೇಮರಳ್ಳಿ ವೃತ್ತದ ಬಳಿಯಿರುವ ರೇಷ್ಮೆ ಇಲಾಖೆಗೆ ಸೇರಿದ ರೇಷ್ಮೆ ಕಾರ್ಖಾನೆಯ ಜಾಗದಲ್ಲಿ ಮುಖ್ಯರಸ್ತೆಗೆ ಹೊಂದಿಕೊಂಡಂತೆ ಇರುವ 3 ಎಕರೆ 20 ಗುಂಟೆ ಜಮೀನನ್ನು ಕ.ರಾ.ರ.ಸಾ.ನಿಗಮದ ಬಸ್ ನಿಲ್ದಾಣ ನಿರ್ಮಿಸಲು ಉಚಿತವಾಗಿ ಮಂಜೂರು ಮಾಡಿಸಿಕೊಡುವಂತೆ ಕೃಷಿ ಮತ್ತು ರೇಷ್ಮೆ ಇಲಾಖೆ ಹಾಗೂ ಜಿಲ್ಲಾಡಳಿತವನ್ನು ಕೋರಲಾಗಿರುತ್ತದೆ.<br><br>ಸದರಿ ನಿವೇಶನವು ನಿಗಮದ ಸ್ವಾಧೀನಕ್ಕೆ ಬಂದ ನಂತರ ಸಂಸ್ಥೆಯು ಬಸ್ ನಿಲ್ದಾಣ ನಿರ್ಮಾಣ ಮಾಡಲು ಹೊರಡಿಸಿರುವ ಸುತ್ತೋಲೆ ಸಂಖ್ಯೆ: 01/2015-16, ದಿ:06.06.2015ರ ಪ್ರಕಾರ ಸಾರಿಗೆ ಅವಶ್ಯಕತೆ ಹಾಗೂ ಆರ್ಥಿಕ ಲಭ್ಯತೆಯನ್ನು ಆಧರಿಸಿ ಈ ಬಗ್ಗೆ ಕ್ರಮ ಜರುಗಿಸಲಾಗುವುದು. |

ಸಂಖ್ಯೆ: ಟಿಡಿ 162 ಟಿಸಿಕ್ಯೂ 2021

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿಗಳು ಹಾಗೂ
ಸಾರಿಗೆ ಸಚಿವರು